ಆ) ಈ ಯೋಜನೆಗಾಗಿ, ಕರ್ನಾಟಕ ಕೈಗಾರಿಕಾ ಪ್ರದೇಶಗಳ ಅಭಿವೃದ್ಧಿ ಮಂಡಳಿಯ ಮುಖಾಂತರ 4276 ಎಕರೆ 11 1/2 ಗುಂಟೆ ಜಮೀನನ್ನು ಗುರುತಿಸಲಾಗಿದೆ. ಇದರಲ್ಲಿ ಸುಮಾರು 3500 ಎಕರೆಯಷ್ಟು ಜಮೀನನ್ನು ವಿಮಾನ ನಿಲ್ದಾಣದ ಯೋಜನೆಗಾಗಿ ನಿಯೋಜಿಸುವ ಪ್ರಸ್ತಾಪವಾಗಿದೆ.

ಇ) ವಿಮಾನ ನಿಲ್ದಾಣ ಸ್ಥಾಪನೆ ಒಳಗೊಂಡಂತೆ ನಾಗರೀಕ ವಾಯುಯಾನ ವಿಷಯಗಳು ಕೇಂದ್ರ ಸರ್ಕಾರಕ್ಕೆ ಸಂಬಂಧಪಟ್ಟಿದ್ದು, ಈ ಯೋಜನೆಗೆ ಕೇಂದ್ರ ಸರ್ಕಾರದ ಒಪ್ಪಿಗೆ ಅವಶ್ಯವಾಗಿದೆ. ಈ ಒಪ್ಪಿಗೆಯನ್ನು ಕೋರಿ ರಾಜ್ಯ ಸರ್ಕಾರವು ನವೆಂಬರ್ 1996ರಲ್ಲಿ ಕೇಂದ್ರಸರ್ಕಾರವನ್ನು ಸಂಪರ್ಕಿಸಿದ್ದು, ಕೇಂದ್ರ ನಾಗರೀಕ ವಿಮಾನಯಾನ ಅಧಿಕಾರಿಗಳೊಂದಿಗೆ ಇದರ ಬಗ್ಗೆ ರಾಜ್ಯ ಸರ್ಕಾರದ ಹಿರಿಯ ಅಧಿಕಾರಿಗಳು ಈ ಯೋಜನೆಯ ವಿವಿಧ ಅಂಶಗಳ ಮೇಲೆ ದೀರ್ಘ ಚರ್ಚೆ ನಡೆಸಿದ್ದಾರೆ ಆದಾಗ್ಯೂ ಕೇಂದ್ರ ಸರ್ಕಾರದ ಒಪ್ಪಿಗೆ ಈವರೆವಿಗೂ ದೊರೆತಿಲ್ಲ.

ಈ) ರಾಜ್ಯ ಸರ್ಕಾರವು ಈ ಯೋಜನೆಗೆ ಪ್ರಾಧಾನ್ಯತೆ ಮೇಲೆ ಒಪ್ಪಿಗೆ ನೀಡಲು ಕೇಂದ್ರ ಸರ್ಕಾರವನ್ನು ಒತ್ತಾಯಿಸುತ್ತಾ ಕೇಂದ್ರ ಸರ್ಕಾರದ ಒಪ್ಪಿಗೆ ದೊರೆತಕೂಡಲೇ ನಿರ್ಮಾಣದ ಕಾರ್ಯವನ್ನು ತ್ವರಿತಗತಿಯಲ್ಲಿ ನಡೆಸಲಾಗುವುದು.

ಬಾದಾಮಿ ಮತ ಕ್ಷೇತ್ರದಲ್ಲಿ ವಿದ್ಯುತ್ ಸೌಲಭ್ಯಗಳನ್ನು ಕಲ್ಪಿಸುವುದು

9 (149)

ಶ್ರೀ ಬಿ.ಬಿ.ಚಿಮ್ಮನಕಟ್ಟಿ (ಬಾದಾಮಿ): ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) ಬಾದಾಮಿ ಮತಕ್ಷೇತ್ರದ 48 ಹಳ್ಳಿಗಳ ಬಡಾವಣೆಗಳಿಗೆ ಹಲವಾರು ವರ್ಷಗಳಿಂದ ಬೀದಿ ದೀಪಗಳ ವ್ಯವಸ್ಥೆ ಆಗಬೇಕಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಬಂದಿದ್ದಲ್ಲಿ ಎಷ್ಟು ಗ್ರಾಮಗಳ ಬಡಾವಣೆಗಳಿಗೆ ವಿದ್ಯುತ್ ಸೌಲಭ್ಯಗಳನ್ನು ಕಲ್ಪಿಸಲಾಗಿದೆ?

ಇ) ಇನ್ನುಳಿದ ಬಡಾವಣೆಗಳಿಗೆ ಈ ಆರ್ಥಿಕ ವರ್ಷದಲ್ಲಿ ವಿದ್ಯುತ್ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಶರಣಬಸಪ್ಪ ದರ್ಶನಾಪುರ (ಇಂಧನ ರಾಜ್ಯ ಸಚಿವರು):

ಅ) ಹೌದು.

ಆ ಮತ್ತು ಇ) ಈ 48 ಹಳ್ಳಿಗಳ ಬಡಾವಣೆಗಳಿಗೆ ಬೀದಿ ದೀಪಗಳನ್ನು ವ್ಯವಸ್ಥೆಮಾಡಲು ಸಂಬಂಧಿಸಿದ ಗ್ರಾಮಪಂಚಾಯ್ತಿಗಳು ಮಂಡಳಿಗೆ ಅರ್ಜಿಗಳನ್ನು ಸಲ್ಲಿಸಬೇಕಾಗುತ್ತದೆ. ಪ್ರಸ್ತುತ 11 ಹಳ್ಳಿಗಳ ಬಡಾವಣೆಗಳಿಗೆ ಮಾತ್ರ ಬೀದಿ ದೀಪಗಳ ವ್ಯವಸ್ಥೆಗಾಗಿ ಸಂಬಂಧಿಸಿದ ಗ್ರಾಮಪಂಚಾಯ್ತಿಗಳು ಅರ್ಜಿಗಳನ್ನು ಮಂಡಳಿಗೆ ಸಲ್ಲಿಸಿವೆ. ಉಳಿದ 37 ಹಳ್ಳಿಗಳ ಬಡಾವಣೆಗಳಿಗೆ ಬೀದಿ ದೀಪದ ವ್ಯವಸ್ಥೆಗಾಗಿ ಸಂಬಂಧಿಸಿದ ಗ್ರಾಮಪಂಚಾಯ್ತಿಗಳಿಂದ ಅರ್ಜಿಗಳು ಮಂಡಳಿಗೆ ಬಂದಿರುವುದಿಲ್ಲ. ಆದುದರಿಂದ ಈ ಹಳ್ಳಿಗಳ ಬಡಾವಣೆಗಳ ಬಗ್ಗೆ ಕ್ರಮ ತೆಗೆದುಕೊಳ್ಳಲು ಸಾಧ್ಯವಾಗಿಲ್ಲ.

ಸಂಬಂಧಿಸಿದ ಗ್ರಾಮ ಪಂಚಾಯ್ತಿಗಳು ಬೀದಿ ದೀಪದ ವ್ಯವಸ್ಥೆಗಾಗಿ ಅರ್ಜಿಗಳನ್ನು ಸಲ್ಲಿಸಿರುವ 11ಹಳ್ಳಿಗಳ ಬಡಾವಣೆಗಳ ಪೈಕಿ 3 ಹಳ್ಳಿಗಳ ಬಡಾವಣೆಗಳಿಗೆ ಬೀದಿ ದೀಪದ ಸೌಲಭ್ಯವನ್ನು ಕಲ್ಪಿಸಲಾಗಿದೆ. ಉಳಿದ 8 ಹಳ್ಳಿಗಳ ಬಡಾವಣೆಗಳಿಗೆ ಬೀದಿ ದೀಪದ ಸೌಲಭ್ಯವನ್ನು ಕಲ್ಪಿಸುವ ಬಗ್ಗೆ ಅಂದಾಜು ಪತ್ರಿಕೆಗಳನ್ನು ತಯಾರಿಸಲಾಗಿದೆ. ಪ್ರಸಕ್ತ ಆರ್ಥಿಕ ವರ್ಷ ಮುಕ್ತಾಯಗೊಳ್ಳುತ್ತಿರುವುದರಿಂದ, ಮುಂಬರುವ ಆರ್ಥಿಕ ವರ್ಷದಲ್ಲಿ ಈ 8 ಹಳ್ಳಿಗಳ ಬಡಾವಣೆಗಳಿಗೆ ಬೀದಿ ದೀಪದ ಸೌಲಭ್ಯವನ್ನು ಕಲ್ಪಿಸಲು ಕ್ರಮ ತೆಗೆದುಕೊಳ್ಳಲಾಗುವುದು. ಅಲ್ಲದೇ ಹೆಚ್ಚುವರಿ ಬೀದಿ ದೀಪಗಳನ್ನು ಅಳವಡಿಸಲು ಸಂಬಂಧಿಸಿದ ಗ್ರಾಮ ಪಂಚಾಯ್ತಿಗಳ ವಿದ್ಯುತ್ ಬಿಲ್ಲುಗಳ ಬಾಕಿಯನ್ನು ಸಂಪೂರ್ಣವಾಗಿ ಮಂಡಳಿಗೆ ತೀರಿಸುವುದು ಅವಶ್ಯಕವಾಗಿದೆ.

ಮಲಪ್ರಭಾ-ಘಟಪ್ರಭಾ ಬಲದಂಡೆ ಕಾಲುವೆಯ ಕಾಮಗಾರಿ

10 (152)

ಶ್ರೀ ಬಿ.ಬಿ.ಚಿಮ್ಮನಕಟ್ಟಿ (ಬಾದಾಮಿ): ಮಾನ್ಯ ಭಾರೀ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 2000ನೇ ಇಸ್ವಿಯೊಳಗೆ ಮಲಪ್ರಭಾ-ಘಟಪ್ರಭಾ ಬಲದಂಡೆ ಕಾಲುವೆಯ ಕಾಮಗಾರಿಯನ್ನು ಪೂರ್ತಿಗೊಳಿಸಲು ಎಷ್ಟು ಅನುದಾನ ಬೇಕಾಗುತ್ತದೆ?

ಆ) ಅದರಲ್ಲಿ 1998-99 ಹಾಗೂ 1999-2000 ಇಸ್ವಿಗೆ ನಿಗದಿಪಡಿಸಿದ ಹಣವೆಷ್ಟು? ಅದಕ್ಕೆ ಅನುಗುಣವಾಗಿ ಸಿಬ್ಬಂದಿ ವ್ಯವಸ್ಥೆ ಮಾಡಲಾಗಿದೆಯೇ?

ಇ) ಹಾಗಿದ್ದಲ್ಲಿ ಸರ್ಕಾರದವರು ನಿರ್ದಿಷ್ಟವಾಗಿ ಕೈಗೊಂಡ ಕ್ರಮವೇನು? ಅದರಲ್ಲಿ ಬಾದಾಮಿ ತಾಲ್ಲೂಕಿನಲ್ಲಿ ಯಾವಾಗ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುವುದು?

ಶ್ರೀ ಕೆ.ಎನ್.ನಾಗೇಗೌಡ (ಭಾರೀ ನೀರಾವರಿ ಸಚಿವರು):